ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಸೋಮವಾರ, ದಿನಾಂಕ: 15ನೇ ಜುಲೈ, 2019

ಜಾತಿ ಜನಗಣತಿ ವರದಿ ಬಹಿರಂಗ ಮಾಡದಿರುವ ಬಗ್ಗೆ

ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)-

4 (54) ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ಜಾತಿ ಜನಗಣತಿ/ಸಮೀಕ್ಷೆ ನಡೆದಿದ್ದು ಯಾವಾಗ ; ಜಾತಿಗಣತಿ/ಸಮೀಕ್ಷೆ ಪೂರ್ಣಗೊಂಡಿದ್ದು ಯಾವಾಗ ; ಗಣತಿಗೆ ಎಷ್ಟು ಜನ ಅಧಿಕಾರಿ/ನೌಕರರನ್ನು ಬಳಸಿಕೊಳ್ಳಲಾಯ್ತು ; ಇದಕ್ಕಾಗಿ ವೆಚ್ಚವಾಗಿರುವ ಹಣ ಎಷ್ಟು; (ಸ್ಪಷ್ಟ ಮಾಹಿತಿ ನೀಡುವುದು)

(ಆ) ಸರ್ಕಾರ ಹೊಸದಾಗಿ ಜಾತಿ ಗಣತಿ/ಸಮೀಕ್ಷೆ ನಡೆಸಲು ಕಾರಣಗಳೇನು ; ಸಮೀಕ್ಷೆ/ಗಣತಿ ಮಾಡುವಾಗ ಯಾವ ಅಂಶಗಳನ್ನು ಗಣನೆಗೆ ತೆಗೆದುಕೊಳ್ಳಲಾಗಿದೆ ;

(ಇ) ಜಾತಿ ಗಣತಿ/ಸಮೀಕ್ಷೆಯ ವರದಿ ಸಿದ್ಧವಾಗಿದೆಯೇ ; ವರದಿ ಸಿದ್ಧವಾಗದಿದ್ದಲ್ಲಿ ಕಾರಣಗಳೇನು ; ವರದಿಯನ್ನು ಸರ್ಕಾರ ಅಂಗೀಕರಿಸಿದೆಯೇ ; ಅಂಗೀಕರಿಸಿದ್ದಲ್ಲಿ ಜಾರಿಗೆ ತರುವ ಬಗ್ಗೆ ಸರ್ಕಾರದ ನಿಲುವೇನು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಹೊಸದಾಗಿ ಜಾತಿವಾರು ಸಮೀಕ್ಷೆ ನಡೆಸುವುದರಿಂದ ಆಗುವ ಅನುಕೂಲ-ಅನಾನುಕೂಲತೆಗಳೇನು ? (ವಿವರ ನೀಡುವುದು)